6

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2010-11ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಅನುದಾನದ ಮರುಹಂಚಿಕೆ.

ಓದಲಾಗಿದೆ:- (1) ಆದೇಶ ಸಂಖ್ಯೆ:ಎಹೆಚ್‌ಡಿ/33/ಎಎಂಎಸ್/2010 ದಿನಾಂಕ:09-07-2010.

(2) ಪತ್ರ ಸಂಖ್ಯೆ:ಪಂವಾಯೋ/154/2009-10 ದಿನಾಂಕ:03-09-2010.

******

**ಪ್ರಸ್ತಾವನೆ:**

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೀನುಗಾರಿಕೆ ಇಲಾಖೆಗೆ ಸಂಬಂಧಿಸಿದ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ರೂ.5288.00ಲಕ್ಷಗಳ ಯೋಜನೆಗೆ ರಾಜ್ಯಮಟ್ಟದ ಅನುಮೋದನಾ ಸಮಿತಿಯು ಅನುಮೋದನೆ ನೀಡಿರುತ್ತದೆ. ಆ ಪೈಕಿ 2008-09ನೇ ಸಾಲಿನಲ್ಲಿ ಬಿಡುಗಡೆಯಾದ ರೂ.1314.00 ಲಕ್ಷ ಹಾಗೂ 2009-10ನೇ ಸಾಲಿನಲ್ಲಿ ರೂ.1869.00 ಲಕ್ಷಗಳನ್ನು ಬಳಸಿಕೊಂಡು ಪ್ರಸ್ತುತ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

4 OCT 2010 ಬೆಂಗಳೂರು

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಕೃಷಿ ಇಲಾಖೆಯ ಆದೇಶದಲ್ಲಿ 2010-11ನೇ ಸಾಲಿಗೆ ಮೀನುಗಾರಿಕೆ ಇಲಾಖೆಗೆ ಅನುಮೋದನೆಯಾಗಿರುವ ರೂ.600.00 ಲಕ್ಷಗಳನ್ನು ಬಿಡುಗಡೆಗೊಳಿಸಿರುತ್ತದೆ.

4/10/10

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಮೀನುಗಾರಿಕೆ ನಿರ್ದೇಶಕರ ಪತ್ರದಲ್ಲಿ, 2010-11ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸದರಿ ಅನುದಾನ ವನ್ನು ಈ ಕೆಳಗಿನಂತೆ ವಿವಿಧ ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆಗೊಳಿಸಲು ಕೋರಿರುತ್ತಾರೆ.

(ರೂ.ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಕಾರ್ಯಕ್ರಮ | ಅನುಷ್ಠಾನ ಸಂಸ್ಥೆ | ಬಿಡುಗಡೆ ಗೊಳಿಸಬೇಕಾದ ಅನುದಾನ ರೂ. |
|---|---|---|---|
| 1) | ಮೀನುಮರಿ ಉತ್ಪಾದನಾ ಕೇಂದ್ರಗಳ ಬಲವರ್ಧನೆ | ಮೀನುಗಾರಿಕೆ ಇಲಾಖೆ, ಬೆಂಗಳೂರು | 579.00 |
| 2) | ಮಣ್ಣು ಮತ್ತು ನೀರು ಪರೀಕ್ಷಾ ಪ್ರಯೋಗಾಲಯ ಮತ್ತು ಮಾಹಿತಿ ಕೇಂದ್ರ ಸ್ಥಾಪನೆ ಹಾಗೂ ಮೀನು ಉತ್ಪಾದನೆ ಹೆಚ್ಚಿಸುವ ತಂತ್ರಾಂಶಗಳ ಅಭಿವೃದ್ಧಿ | ಕರ್ನಾಟಕ ಪಶು ವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್ | 11.00 |
| 3) | ಮತ್ಸ್ಯ ತಂತ್ರಾಂಶ ಅಭಿವೃದ್ಧಿ | ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು | 10.00 |
| | | ಒಟ್ಟು | **600.00** |

-2-

ಕ್ರಮ ಸಂಖ್ಯೆ 1 ಮೀನುಗಾರಿಕೆ ಇಲಾಖೆಗೆ ಸಂಬಂಧಿಸಿದಂತೆ ರೂ.579.00 ಲಕ್ಷಗಳನ್ನು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ಬೆಂಗಳೂರು ಇವರಿಗೆ ಬಿಡುಗಡೆಗೊಳಿಸುವಂತೆ ಮೀನುಗಾರಿಕೆ ನಿರ್ದೇಶಕರು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಪಸಂಮೀ 210 ಮೀಇಯೋ 2010, ಬೆಂಗಳೂರು ದಿನಾಂಕ:29-09-2010**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2010-11ನೇ ಸಾಲಿಗೆ ಮೀನುಗಾರಿಕೆ ಇಲಾಖೆಗೆ ಅನುಮೋದನೆಯಾಗಿರುವ ರೂ.600.00 ಲಕ್ಷ (ಆರುನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಕಾಣಿಸಿದಂತೆ ಅನುಷ್ಠಾನ ಸಂಸ್ಥೆಗಳಿಗೆ ಅವುಗಳ ಎದುರಿಗೆ ನಮೂದಿಸಿರುವ ಕಾರ್ಯಕ್ರಮಗಳಿಗೆ ಬಿಡುಗಡೆಗೊಳಿಸಲಾಗಿರುತ್ತದೆ.

(ರೂ.ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಕಾರ್ಯಕ್ರಮ | ಅನುಷ್ಠಾನ ಸಂಸ್ಥೆ | ಬಿಡುಗಡೆ ಗೊಳಿಸಬೇಕಾದ ಅನುದಾನ |
|---|---|---|---|
| 1) | ಮೀನುಮರಿ ಉತ್ಪಾದನಾ ಕೇಂದ್ರಗಳ ಬಲವರ್ಧನೆ | ಮೀನುಗಾರಿಕೆ ಇಲಾಖೆ, ಬೆಂಗಳೂರು | 579.00 |
| 2) | ಮಣ್ಣು ಮತ್ತು ನೀರು ಪರೀಕ್ಷಾ ಪ್ರಯೋಗಾಲಯ ಮತ್ತು ಮಾಹಿತಿ ಕೇಂದ್ರ ಸ್ಥಾಪನೆ ಹಾಗೂ ಮೀನು ಉತ್ಪಾದನೆ ಹೆಚ್ಚಿಸುವ ತಂತ್ರಾಂಶಗಳ ಅಭಿವೃದ್ಧಿ | ಕರ್ನಾಟಕ ಪಶು ವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್ | 11.00 |
| 3) | ಮತ್ಸ್ಯ ತಂತ್ರಾಂಶ ಅಭಿವೃದ್ಧಿ | ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು | 10.00 |
| | | ಒಟ್ಟು | **600.00** |

ಸದರಿ ಮೊತ್ತವನ್ನು ಮೇಲ್ಕಂಡ ಅನುಷ್ಠಾನ ಸಂಸ್ಥೆಗಳು ಸಲ್ಲಿಸುವ ಪೇಯೀಸ್ ರಸೀದಿಗಳಿಗೆ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರು ಮೇಲು ರುಜುಗೊಳಿಸಿ ರಾಜ್ಯ ಹುಜೂರ್ ಖಜಾನೆಯಿಂದ ಸೆಳೆದು ಪಾವತಿಸಲು ಅನುಮತಿ ನೀಡಲಾಗಿದೆ.

ಸದರಿ ವೆಚ್ಚವನ್ನು 2010-11ನೇ ಸಾಲಿನ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ-00-800-ಇತರೆ ವೆಚ್ಚ-0-22-ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ಮೀನುಗಾರಿಕೆ-059 ಇತರ ಖರ್ಚು (ಯೋಜನೆ)" ಅಡಿ ಒದಗಿಸಿರುವ ಅನುದಾನ ರೂ.3483.00 ಲಕ್ಷಗಳಿಂದ ಭರಿಸತಕ್ಕದ್ದು.

ಈ ಆದೇಶವನ್ನು ಕೃಷಿ ಇಲಾಖೆಯ ಆದೇಶ ಸಂಖ್ಯೆ:ಎಹೆಚ್‌ಡಿ/33/ಎಎಂಎಸ್/2010 ದಿನಾಂಕ:09-07-2010ರ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಂ.ರಾಜಣ್ಣ) 29/9/10.
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)

ಕರ್ನಾಟಕ ರಾಜ್ಯ ಸರ್ಕಾರ ಮೀನುಗಾರಿಕೆ ನಿರ್ದೇಶನಾಲಯ ಬೆಂಗಳೂರು
4 OCT 2010

ಇವರಿಗೆ:

1. ಮಹಾಲೇಖಪಾಲರು, ಎ ಮತ್ತು ಇ, ಎಯು-1 ಮತ್ತು 2, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ಬೆಂಗಳೂರು.
3. ಕುಲಸಚಿವರು, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್.
4. ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಜಿ.ಕೆ.ವಿ.ಕೆ., ಬೆಂಗಳೂರು.
5. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
6. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7. ಜಂಟಿ ನಿರ್ದೇಶಕರು, ಗಣಕ ಜಾಲ ಕೇಂದ್ರ, ಖನಿಜ ಭವನ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
11. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.